ಈ) ಹಾಗಿದ್ದಲ್ಲಿ, ಈ ಯೋಜನೆಯನ್ನು ಯಾವಾಗ ಕೈಗೆತ್ತಿಕೊಳ್ಳಲಾಗುವುದು?

ಶ್ರೀ ಹೆಚ್. ಡಿ. ರೇವಣ್ಣ (ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು) :

ಅ) ಹೌದು ಬಂದಿರುತ್ತದೆ.

ಆ) ಸಿಂಧಗಿ ತಾಲ್ಲೂಕಿನಲ್ಲಿಯ ಜಿಲ್ಲಾ ಮುಖ್ಯ ರಸ್ತೆಗಳಲ್ಲಿನ ಗುಂಡಿಗಳನ್ನು ತುಂಬಿ ನಿರ್ವಹಣೆ ಮಾಡುವುದರ ಸಲುವಾಗಿ ರೂ. 37.60 ಲಕ್ಷ ಅನುದಾನ ಮತ್ತು ಸುಧಾರಣೆ ಸಲುವಾಗಿ 20.70 ಲಕ್ಷಗಳ ಅನುದಾನ ಒದಗಿಸಲಾಗಿದೆ. ಸದರಿ ಕಾಮಗಾರಿಗೆ ಗುತ್ತಿಗೆ ನಿಗದಿಯಾಗಿದ್ದು ಗುಂಡಿ ತುಂಬುವ ಕಾಮಗಾರಿ ಪ್ರಗತಿಯಲ್ಲಿದೆ. ಈ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ರಾಜ್ಯ ಹೆದ್ದಾರಿಗಳ ನಿರ್ವಹಣೆಯನ್ನು ರೂ.40.80 ಲಕ್ಷದಲ್ಲಿ ಮಾಡಲಾಗುತ್ತಿದೆ. (ಅನುದಾನ ಬಿಡುಗಡೆಯಾಗಿದೆ) ಸದರಿ ಕಾಮಗಾರಿಯನ್ನು ಮಾರ್ಚ್ ಅಂತ್ಯದೊಳಗಾಗಿ ಪೂರ್ಣಗೊಳಿಸಲಾಗುವುದು.

ಇ) ಅನುದಾನದ ಲಭ್ಯತೆಯನ್ನು ಆಧರಿಸಿ ಯವುದಾದರು ಯೋಜನೆಯಡಿಯಲ್ಲಿ ಕಾಮಗಾರಿಯನ್ನು ತೆಗೆದುಕೊಳ್ಳುವ ಬಗ್ಗೆ ಪರಿಶೀಲಿಸಲಾಗುವುದು.

ಈ) ಮೇಲ್ಕಂಡಂತೆ ಕ್ರಮ ಕೈಗೊಳ್ಳಲಾಗುವುದು.

688(153) ಶ್ರೀ ಅಶೋಕ್ ಆರ್. (ಉತ್ತರಹಳ್ಳಿ): ಮಾನ್ಯ ಪೌರಾಡಳಿತ ಹಾಗೂ ಕೆಯುಐಡಿಎಫ್‌ಸಿ ಸಚಿವರು ಈ ಕೆಳಕಂಡ ಪ್ರಶ್ನೆಗೆ ಉತ್ತರಿಸುವರೇ?

ಅ) ಉತ್ತರಹಳ್ಳಿ ವಿಧಾನಸಭೆ ವ್ಯಾಪ್ತಿಯಲ್ಲಿ ಬರುವ ದಾಸರಹಳ್ಳಿ ಕೆರೆಗೆ ಪೀಣ್ಯದ ಸಣ್ಣ ಕೈಗಾರಿಕೆಗಳಿಂದ ಬರುವ ಕಲುಷಿತ ಮತ್ತು ಒಳಚರಂಡಿ ನೀರು ತುಂಬಿ ಸುತ್ತಮುತ್ತಲಿನ ನೂರಾರು ಕೊಳವೆ ಬಾವಿಗಳು ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಕೆರೆಗೆ ಹರಿದು ಬರುವ ಕಲುಷಿತ ಒಳಚರಂಡಿ ನೀರನ್ನು ತಡೆಯುವ ಯೋಜನೆ ಏನಾದರೂ ಸರ್ಕಾರದ ಮುಂದಿದೆಯೇ;

ಇ) ಇದ್ದಲ್ಲಿ, ಅದನ್ನು ಯಾವಾಗ ಅನುಷ್ಠಾನಕ್ಕೆ ತರಲಾಗುವುದು?

ಶ್ರೀ ಎಸ್. ಆರ್. ಮೋರೆ (ಪೌರಾಡಳಿತ ಹಾಗೂ ಕೆಯುಐಡಿಎಫ್‌ಸಿ ಸಚಿವರು) :

ಅ) – ಇಲ್ಲ –

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

689(160) ಶ್ರೀ ಅಶೋಕ್ ಆರ್. (ಉತ್ತರಹಳ್ಳಿ): ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗೆ ಉತ್ತರಿಸುವರೇ?

ಅ) ಬೆಂಗಳೂರು ಉತ್ತರ ತಾಲ್ಲೂಕು ಯಶವಂತಪುರ ಹೋಬಳಿ ಕೊಡಿಗೇಹಳ್ಳಿ ಗ್ರಾಮದ ಸರ್ವೆ ನಂ. 88 ರಲ್ಲಿ ಕಳೆದ 40 ವರ್ಷಗಳಿಂದ ಬಗರ್ ಹುಕುಂ ಸಾಗುವಳಿ ಮಾಡಿಕೊಂಡು ಬಂದಿದ್ದ ಬಡ ರೈತರ ಜಮೀನನ್ನು ಸರ್ಕಾರದಿಂದ ಕಾರಿಡಾರ್ ಯೋಜನೆಯಲ್ಲಿ ವಶಪಡಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಬಗರ್ ಹುಕುಂ ಸಾಗುವಳಿಯಲ್ಲಿ ಜಮೀನನ್ನು ಕಳೆದುಕೊಂಡ ಬಡ ರೈತರಿಗೆ ಸರ್ಕಾರ ಬೇರೆ ಬದಲಿ ಜಮೀನಿನ ಪರಿಹಾರವನ್ನು ನೀಡಲಾಗಿದೆಯೇ;

ಇ) ಇಲ್ಲವಾದಲ್ಲಿ, ಈ ಪರಿಹಾರವನ್ನು ಯಾವಾಗ ನೀಡಲಾಗುವುದು;